ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಾಧ್ಯಮ ಕೈಗಾರಿಕಾ ಸಚಿವರು)

ಅ) ಮೆ: ಜಿಂದಾಲ್ ವಿಜಯನಗರ ಸ್ಟೀಲ್ ಸಂಸ್ಥೆಯು ತನ್ನ ಉತ್ಪಾದನೆಯ ಪ್ರಕ್ರಿಯೆಯಲ್ಲಿ ಬರುವ ಸಿದ್ಧ ವಸ್ತುಗಳು ಹಾಗೂ ಬೈ ಪ್ರಾಡೆಕ್ಟ್ಸ್ ಮತ್ತು ವೆಸ್ಟ್ ಪ್ರಾಡೆಕ್ಟ್ (ಕೋಲಾಪೈನ್ ಸೇರಿದಂತೆ)

ಇವುಗಳ ಮಾರಾಟದ ಮೇಲೆ ಮಾರಾಟ ತೆರಿಗೆ ವಿನಾಯಿತಿಯನ್ನು ಸರ್ಕಾರ ಆದೇಶ ಸಂ:ಸಿಐ 29 ಎಸ್‌ಪಿಐ 94, ದಿ: 11.4.94, 25.5.99 ಮತ್ತು 14.3.01 ರಂತೆ ನೀಡಲಾಗಿದೆ.

ಆ) ಮೇಲ್ಕಂಡ ಸರ್ಕಾರಿ ಆದೇಶವನ್ನು ಘಟಕವು ಮಾರಾಟ ಮಾಡುವ ಎಲ್ಲಾ ಸಿದ್ಧವಸ್ತುಗಳು, ಬೈ ಪ್ರಾಡಕ್ಟ್ಸ್ ಮತ್ತು ವೇಸ್ಟ್ ಪ್ರಾಡಕ್ಟ್ಸ್, (ಕೋಲಾಪೈನ್ ಸೇರಿದಂತೆ) 14 ವರ್ಷಗಳವರೆವಿಗೆ 6,500-00 ಕೋಟಿ ರೂ.ಗಳ ಮೂಲ ಸ್ವತ್ತುಗಳ ಗರಿಷ್ಠ ಮಿತಿ ಮೀರದಂತೆ ಉಪಯೋಗಿಸಿಕೊಳ್ಳಲು ಸರ್ಕಾರಿ ಆದೇಶ ಹೊರಡಿಸಲಾಗಿದೆ. ಘಟಕವು ಉಪಯೋಗಿಸಿಕೊಳ್ಳಬಹುದಾದ ವಿನಾಯಿತಿಯು ಘಟಕ ಮಾರಾಟ ಮಾಡುವ ವಸ್ತುಗಳ ಪ್ರಮಾಣದ ಆಧಾರದ ಮೇಲೆ ಇರುತ್ತದೆ.

ಬಾಂಗ್ಲಾ ನಿರಾಶ್ರಿತರಿಗೆ ಜಾತಿ ಪ್ರಮಾಣ ಪತ್ರ

599(826) ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ತಾಲ್ಲೂಕಿನಲ್ಲಿ ಸುಮಾರು 20-75 ಸಾವಿರ ಬಾಂಗ್ಲಾ ನಿರಾಶ್ರಿತರು ವಾಸಿಸುತ್ತಿದ್ದು ಇವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡಲು ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಈ ಪ್ರಮಾಣ ಪತ್ರವನ್ನು ನೀಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಕೇಂದ್ರ ಸರ್ಕಾರದ ಪತ್ರದ ಪ್ರಕಾರ, ಪರಿಶಿಷ್ಟ ಜಾತಿ ಪ್ರಮಾಣಪತ್ರವನ್ನು ಕರ್ನಾಟಕದಲ್ಲಿರುವ ಭಾರತೀಯ ಪೌರತ್ವವನ್ನು ಪಡೆದಿರುವ ನಿರಾಶ್ರಿತರಿಗೆ ನೀಡುವುದು. ಅವರುಗಳ ಜಾತಿಯು ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿದ್ದರೆ ಮಾತ್ರ ಅವರುಗಳಿಗೆ ಜಾತಿ ಪತ್ರ ನೀಡಲಾಗುತ್ತಿದೆ. ಕರ್ನಾಟಕಕ್ಕೆ ಸಂಬಂಧಿಸಿದಂತೆ "ನಮಶೂದ್ರ" ವು ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿ ಸೇರಿಲ್ಲವಾದುದ್ದರಿಂದ ಅವರುಗಳಿಗೆ ಜಾತಿ ಪತ್ರವನ್ನು ನೀಡಲಾಗುವುದಿಲ್ಲ.

ಧಾರವಾಡ ಜಿಲ್ಲೆಯಲ್ಲಿ ಪಿ.ಎಂ. ಆರ್. ವೈ. ಯೋಜನೆಯಡಿ ಸಾಲದ ಅರ್ಜಿಗಳು

600(411) ಶ್ರೀ ಹೊನ್ನಳ್ಳಿ ಜಬ್ಬಾರ್‌ಖಾನ್ ಹೈಯತ್‌ಖಾನ್ (ಹುಬ್ಬಳ್ಳಿ) ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2000-01, 2001-02ನೇ ಸಾಲಿನಲ್ಲಿ ಧಾರವಾಡ ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ರೋಜ್‌ಗಾರ್ ಯೋಜನೆಯಡಿಯಲ್ಲಿ ಸಾಲ ಪಡೆಯಲಿಕ್ಕೆ ಬಂದ ಅರ್ಜಿಗಳೆಷ್ಟು

ಆ) ಮೇಲ್ಕಂಡ ಸಾಲಿನಲ್ಲಿ ಸದರಿ ಯೋಜನೆಯಡಿಯಲ್ಲಿ ಎಷ್ಟು ಜನರಿಗೆ ಸಾಲ ಮಂಜೂರು ಮಾಡಲಾಗಿದೆ, ತಾಲ್ಲೂಕುವಾರು ವಿವರ ನೀಡುವುದು.

ಇ) ಪ್ರಧಾನಮಂತ್ರಿ ರೋಜ್‌ಗಾರ್ ಯೋಜನೆಯಡಿಯಲ್ಲಿ ಸಾಲ ಮಂಜೂರಾದ ಫಲಾನುಭವಿಗಳಿಗೆ ಬ್ಯಾಂಕಿನವರು ವಿಳಂಬ ಧೋರಣೆ ಮಾಡುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಈ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್. ರೋಷನ್‌ಬೇಗ್ (ಸಣ್ಣ ಪ್ರಮಾಣದ ಕೈಗಾರಿಕಾ ಮತ್ತು ಹಜ್ ಸಚಿವರು)

ಅ) ಪ್ರಧಾನ ಮಂತ್ರಿಗಳ ರೋಜ್‌ಗಾರ್ ಯೋಜನೆಯಡಿ ಧಾರವಾಡ ಜಿಲ್ಲೆಯಲ್ಲಿ 2000-01 ಮತ್ತು 2001-02ನೇ ಸಾಲಿಗೆ ಕ್ರಮವಾಗಿ 4722 ಮತ್ತು 3053 ಅರ್ಜಿಗಳು ಬಂದಿವೆ.

ಆ) ಈ 2 ವರ್ಷಗಳಲ್ಲಿ ಮಂಜೂರು ಮಾಡಿದ ತಾಲ್ಲೂಕುವಾರು ವಿವರಗಳು ಈ ಕೆಳಕಂಡಂತಿವೆ:

ತಾಲ್ಲೂಕು	2000-01		2001-02		
	ಗುರಿ	ಸಾಧನೆ	ಗುರಿ	ಸಾಧನೆ	
ಧಾರವಾಡ	271	254	250	219	
ಹುಬ್ಬಳ್ಳಿ	530	504	425	404	
ಕಲಘಟಗಿ	26	25	26	21	
ಕುಂದಗೋಳ	24	28	24	25	
	ಒಟ್ಟು	900	861	769	696

ಇ) ಕೆಲವೊಂದು ಪ್ರಕರಣಗಳಲ್ಲಿ ವಿಳಂಬ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ) ಸರ್ಕಾರದ ಅಭಿವೃದ್ಧಿ ಆಯುಕ್ತರು ಉಪಸ್ಥಿತಿಯಲ್ಲಿ ನಡೆಯುವ ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿಯ ಸಭೆಯಲ್ಲಿ ಇಂತಹ ಪ್ರಕರಣಗಳ ಬಗ್ಗೆ ಚರ್ಚಿಸಿ ಕ್ರಮ ತೆಗೆದುಕೊಳ್ಳಲಾಗುತ್ತದೆ. ಅಲ್ಲದೆ ಬ್ಯಾಂಕುಗಳಿಗೆ ಸ್ವೀಕರಿಸಿದ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಸೂಚಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಹ ಇಂತಹ ಪ್ರಕರಣಗಳನ್ನು ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಎನ್.ಜಿ.ಇ.ಎಫ್ ಕಾರ್ಖಾನೆ ಕುರಿತು

601(1119) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗಾಮೀಣ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?